## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | **713 (835)** |
| ಮಾನ್ಯ ಸದಸ್ಯರ ಹೆಸರು | : | **ಶ್ರೀ ಶರವಣ ಟಿ.ಎ.<br>(ವಿಧಾನ ಸಭೆಯಿಂದ ಚುನಾಯಿತರಾದವರು)** |
| ಉತ್ತರಿಸುವ ದಿನಾಂಕ | : | **12.12.2023** |
| ಉತ್ತರಿಸುವ ಸಚಿವರು | : | **ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು** |

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಯಿಂದ ಮೂಲ ಭೂತ ಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಿದ ಒಟ್ಟು ಭೂಮಿ ಎಷ್ಟು; ಮತ್ತು ಅಭಿವೃದ್ಧಿಪಡಿಸಿದ ಭೂಮಿಯಲ್ಲಿ ಎಷ್ಟು ಕಂಪನಿಗಳು ತಮ್ಮ ಕಾರ್ಯವನ್ನು ಪ್ರಾರಂಭಿಸಿವೆ; (ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು) | ಮಂಡಳಿವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಒಟ್ಟು 5378.24 ಎಕರೆ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದ್ದು ವಿವರಗಳನ್ನು ಅನುಬಂಧ – 1 ರಲ್ಲಿ ನೀಡಲಾಗಿದೆ.<br>ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಒಟ್ಟು 314 ಉದ್ದಿಮೆದಾರರಿಗೆ 1160.4 ಎ-ಗು ಜಮೀನನ್ನು ಹಂಚಿಕೆ ಮಾಡಲಾಗಿದೆ ವಿವರಗಳನ್ನು ಅನುಬಂಧ – 2 ರಲ್ಲಿ ನೀಡಲಾಗಿದೆ. |
| ಆ) | ರಾಜ್ಯದಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂಮಿಯನ್ನು ಪಡೆದು ಉದ್ಯಮ ಚಟುವಟಿಕೆ ಆರಂಭಿಸಿದ ಕಂಪನಿಗಳು ಯಾವುವು; ಹಾಗೂ ಈ ಕಂಪನಿಗಳಿಗೆ ಮಂಜೂರು ಮಾಡಿರುವ ಭೂಮಿ ಪ್ರಮಾಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ಮಂಡಳಿಯ ಹಂಚಿಕೆ ನಿಯಮಾವಳಿಗಳನ್ವಯ ಉದ್ದಿಮೆದಾರರು ಜಮೀನು ಹಂಚಿಕೆ ಮತ್ತು ಸ್ವಾಧೀನ ಪಡೆದು ಗುತ್ತಿಗೆ ಕರಾರು ಪತ್ರ ನೆರವೇರಿಸಿದ ದಿನಾಂಕದಿಂದ 3 ವರ್ಷಗಳ (ಎಂ.ಎಸ್ .ಎಂ.ಇ ಮತ್ತು ಬೃಹತ್ ಯೋಜನೆಗಳು) ಮತ್ತು 5 ವರ್ಷಗಳ (ಮೆಗಾ, ಅಲ್ಟ್ರಾ ಮೆಗಾ ಮತ್ತು ಸೂಪರ್ ಮೆಗಾ ಯೋಜನೆಗಳು) ಕಾಲಾವಕಾಶ ಇರುತ್ತದೆ.<br>ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆ ಪಡೆದ ಉದ್ದಿಮೆದಾರರಿಗೆ ಮೇಲೆ ತಿಳಿಸಿದಂತೆ ಯೋಜನೆ ಅನುಷ್ಠಾನಗೊಳಿಸಲು ಇನ್ನೂ ಕಾಲಾವಕಾಶವಿದ್ದು ಯೋಜನೆ ಅನುಷ್ಠಾನದ ವಿವಿಧ ಹಂತದಲ್ಲಿರುತ್ತದೆ. |

<table>
<tr><th>ಕ್ರಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ)</td><td>ಉದ್ಯಮ ಚಟುವಟಿಕೆ ಆರಂಭಿಸದ ಕಂಪನಿಗಳಿಂದ ಭೂಮಿಯನ್ನು ವಶಪಡಿಸಿಕೊಳ್ಳಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಮಾಣದ ಭೂಮಿಯನ್ನು ವಶಪಡಿಸಿಕೊಂಡಿದೆ ಮತ್ತು ಹಂಚಿಕೆಯನ್ನು ರದ್ದುಪಡಿಸಿದೆ; ರಾಜ್ಯಾದ್ಯಾಂತ ಇನ್ನೂ ವಶಪಡಿಸಿಕೊಳ್ಳುಲು ಬಾಕಿ ಇರುವ ಭೂಮಿಯ ಪ್ರಮಾಣ ಎಷ್ಟು; (ಕಂಪನಿ ಹೆಸರಿನೊಂದಿಗೆ ಮಾಹಿತಿ ನೀಡುವುದು)</td><td rowspan="2">ಮಂಡಳಿಯ ಹಂಚಿಕೆ ನಿಯಮಾವಳಿಗಳನ್ವಯ ಜಮೀನು ಹಂಚಿಕೆ ಪಡೆದ ಉದ್ದಿಮೆದಾರರು ಗುತ್ತಿಗೆ ಕರಾರು ಪತ್ರದನ್ವಯ ನಿಗಧಿತ ಅವಧಿಯೊಳಗೆ ಯೋಜನೆ ಅನುಷ್ಠಾನಗೊಳಿಸದ ಪಕ್ಷದಲ್ಲಿ ಕೆಐಎಡಿ ಕಾಯ್ದೆ ಕಲಂ 34-ಬಿ ರಡಿ ನೋಟಿಸ್ ನೀಡಿ ಜಮೀನು ಹಿಂಪಡೆಯಲು ಕ್ರಮ ಕೈಗೊಳ್ಳಲಾಗುತ್ತದೆ. ಆದರೆ ಕಳೆದ 3 ವರ್ಷಗಳ ಅವಧಿಯಲ್ಲಿ ಹಂಚಿಕೆ ಪಡೆದ ಹಂಚಿಕೆದಾರರಿಗೆ ಯೋಜನೆ ಅನುಷ್ಠಾನಗೊಳಿಸಲು ಇನ್ನೂ ಕಾಲಾವಕಾಶ ಇರುವುದರಿಂದ ಈ ಕ್ರಮ ಕೈಗೊಂಡಿರುವುದಿಲ್ಲ.</td></tr>
<tr><td>ಈ)</td><td>ವಶಪಡಿಸಿಕೊಂಡಿರುವ ಭೂಮಿಯನ್ನು ಮರು ಹಂಚಿಕೆ ಮಾಡಲಾಗಿದೆಯೇ; ಹಾಗಿದ್ದಲ್ಲಿ ಹಂಚಿಕೆಯ ಸಂಪೂರ್ಣ ಮಾಹಿತಿ ನೀಡುವುದು?</td></tr>
</table>

**ಸಂಖ್ಯೆ: ಸಿಐ 337 ಐಎಪಿ 2023**

**(ಎಂ.ಬಿ. ಪಾಟೀಲ)**

**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ**

**ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**